# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 690 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಬಿ. ಕೆ. ಹರಿಪ್ರಸಾದ್ |
| ಉತ್ತರಿಸಬೇಕಾದ ದಿನಾಂಕ | : | 25.09.2020 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2018–19ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಬೆಂಗಳೂರಿನ ಇಂದಿರಾನಗರದಲ್ಲಿರುವ ಸರ್ಕಾರಿ ಕಿವುಡು ಮಕ್ಕಳ ಶಾಲೆಯ ಕಟ್ಟಡದಲ್ಲಿ ವಿಶೇಷ ಶಿಕ್ಷಕರ ಶಿಕ್ಷಣಕ್ಕಾಗಿ ತರಬೇತಿ ಕೇಂದ್ರವನ್ನು / ವಿಶೇಷ ಬಿ.ಇಡಿ ಕಾಲೇಜನ್ನು ಸರ್ಕಾರ ಮತ್ತು ಖಾಸಗಿ ಸಂಸ್ಥೆಗಳ ಪಾಲುದಾರಿಕೆಯಲ್ಲಿ ಆರಂಭಿಸಲಾಗುವುದೆಂದು ಘೋಷಿಸಿದ್ದು, ಸದರಿ ತರಬೇತಿ ಕೇಂದ್ರ ಆರಂಭಿಸಲಾಗಿದೆಯೇ; ಹಾಗಿದ್ದಲ್ಲಿ ಯಾವಾಗಿನಿಂದ ಆರಂಭಿಸಲಾಗಿದೆ; | 2018–19ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಬೆಂಗಳೂರಿನ ಇಂದಿರಾನಗರದಲ್ಲಿರುವ ಸರ್ಕಾರಿ ಕಿವುಡು ಮಕ್ಕಳ ಶಾಲೆಯ ಕಟ್ಟಡದಲ್ಲಿ ವಿಶೇಷ ಶಿಕ್ಷಕರ ಶಿಕ್ಷಣಕ್ಕಾಗಿ ತರಬೇತಿ ಕೇಂದ್ರವನ್ನು / ವಿಶೇಷ ಬಿ.ಇಡಿ ಕಾಲೇಜನ್ನು ಸರ್ಕಾರ ಮತ್ತು ಖಾಸಗಿ ಸಂಸ್ಥೆಗಳ ಪಾಲುದಾರಿಕೆಯಲ್ಲಿ ಆರಂಭಿಸಲಾಗುವುದೆಂದು ಘೋಷಿಸಿದ್ದು, ಸದರಿ ತರಬೇತಿ ಕೇಂದ್ರ ಆರಂಭಿಸಲಾಗಿರುವುದಿಲ್ಲ. |
| ಆ) | ಆರಂಭಿಸಿಲ್ಲವಾದಲ್ಲಿ, ಯಾವ ಕಾರಣಕ್ಕಾಗಿ ಆರಂಭಿಸಿರುವುದಿಲ್ಲ; ಯಾವಾಗ ಆರಂಭಿಸಲಾಗುವುದು? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ಬೆಂಗಳೂರಿನ ಇಂದಿರಾನಗರದಲ್ಲಿರುವ ಸರ್ಕಾರಿ ಕಿವುಡು ಮಕ್ಕಳ ಶಾಲೆಯ ಕಟ್ಟಡದಲ್ಲಿ 100 ಕಿವುಡ ಮಕ್ಕಳಿಗೆ ವಸತಿ ಸೌಲಭ್ಯವನ್ನು ಕಲ್ಪಿಸಬೇಕಾಗಿದ್ದು, ಕಟ್ಟಡದ ಎರಡೂ ಅಂತಸ್ತುಗಳಲ್ಲಿ ಶಾಲೆ ಮತ್ತು ವಸತಿ ಸೌಕರ್ಯಕ್ಕೆ ಮಾತ್ರ ಸ್ಥಳಾವಕಾಶವಿರುತ್ತದೆ. ಆದರೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಪ್ರಾರಂಭಿಸಲು ಸ್ಥಳಾವಕಾಶದ ಕೊರತೆ ಇರುವುದರಿಂದ ಹಂಸಧ್ವನಿ ಶಾಲೆಯ ಕಟ್ಟಡದಲ್ಲಿ ವಿಶೇಷ ಶಿಕ್ಷಕರ ಶಿಕ್ಷಣ ತರಬೇತಿ ಕೇಂದ್ರ/ ವಿಶೇಷ ಬಿ.ಇಡಿ ಕಾಲೇಜನ್ನು ಸರ್ಕಾರ ಮತ್ತು ಖಾಸಗಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ಪ್ರಾರಂಭಿಸಬಹುದೇ ಅಥವಾ ಒಂದು ವೇಳೆ ಸದರಿ ಕಟ್ಟಡದಲ್ಲಿ ಶಿಕ್ಷಕರ ತರಬೇತಿ ಕೇಂದ್ರವನ್ನು ನಡೆಸಲು ಸಾಧ್ಯವಾಗದಿದ್ದರೆ, ಬಾಡಿಗೆ ಕಟ್ಟಡದಲ್ಲಿ ಶಿಕ್ಷಕರ ತರಬೇತಿ ಕೇಂದ್ರವನ್ನು ನಡೆಸಬಹುದೇ ಎಂಬ ಬಗ್ಗೆ ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ: ಮಮಇ 222 ಪಿಹೆಚ್‌ಪಿ 2020**

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ
ಇಲಾಖೆ ಸಚಿವರು